# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಮಂಜುನಾಥ ಜೀವಾಜಿ ಬಾಗಲಕೋಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಳೂರು ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.
**Compt/UPLOK/BGM/1090/2015/ARLO-1, ದಿನಾಂಕ:18.11.2017**

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 10.10.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಕೊಟ್ರೇಶ್ ಬಸಪ್ಪ ಕುದರಿಹಾಳ, ಮೆಡ್ಲೇರಿ ಉದಗಟ್ಟಿ, ರಾಣಿಬೆನ್ನೂರು ತಾಲ್ಲೂಕು ಹಾವೇರಿ ಜಿಲ್ಲೆ ರವರು (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯ ಕಾಮಗಾರಿಗಳಲ್ಲಿ ಕೆಲಸವನ್ನು ನಿರ್ವಹಿಸದೆ ಕರ್ತವ್ಯಲೋಪ ಎಸಗಿ ಸರ್ಕಾರದ ಹಣವನ್ನು ಲೂಟಿ ಭ್ರಷ್ಟಾಚಾರ ಎಸಗಿರುವುದಾಗಿ ರಾಣಿಬೆನ್ನೂರು ತಾಲ್ಲೂಕು ಬೇಳೂರು ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ 1) ಶ್ರೀ ಎ.ಎಸ್.ಸಜ್ಜನರ, ಅಧ್ಯಕ್ಷರಾದ 2) ಶ್ರೀ ಕರಿಯಪ್ಪ ನಾಗಪ್ಪ ಹುಬ್ಬಳ್ಳಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ 3) ಮಂಜುನಾಥ ಜೀವಾಜಿ ಬಾಗಲಕೋಟಿ (ಇನ್ನು ಮುಂದೆ 'ಎದುರುದಾರರು 1, 2 ಮತ್ತು 3' ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ಧ ಲೋಕಾಯುಕ್ತ ಸಂಸ್ಥೆಗೆ ದೂರು ನೀಡಿರುತ್ತಾರೆ.

ಈ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕಡತ ಮತ್ತು ದಾಖಲಾತಿಗಳನ್ನು ಕೂಲಂಕುಷವಾಗಿ ಪರಿಶೀಲಿಸಿ ತನಿಖಾಧಿಕಾರಿಗಳು ಕೆಳಗಿನಂತೆ ವರದಿ ನೀಡಿರುತ್ತಾರೆ.

> ಬೇಳೂರು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸಂಬಂಧಪಟ್ಟ 2010-11ನೇ ಸಾಲಿನ ಎಂಜಿಎನ್‌ಆರ್‌ಇಜಿಎ ಯೋಜನೆಯಡಿ ವಿವಿಧ ಕಾಮಗಾರಿಗಳಿಗೆ ಒಟ್ಟು ರೂ.20,68,237/- ಖರ್ಚಾಗಿದ್ದು, ಈ ಬಗ್ಗೆ ಒಟ್ಟು 34 ಚೆಕ್‌ಗಳನ್ನು ನೀಡಲಾಗಿದ್ದು, ಅವುಗಳ ಪೈಕಿ 20 ಚೆಕ್‌ಗಳನ್ನು ಅಂದರೆ ಕಾಮಗಾರಿಗಳ ಕೂಲಿ ಹಣದ ಪಾವತಿ, ಜೆರಾಕ್ಸ್ ಪ್ರತಿಗಳ ಖರ್ಚು, ಡಿಟಿಪಿ ಮತ್ತು ಗಣಕಯಂತ್ರ ಆಪರೇಟರ್‌ಗಳ ವೇತನಕ್ಕೆ ಒಟ್ಟು 20 ಚೆಕ್‌ಗಳನ್ನು ವಿತರಣೆ ಮಾಡಿ ಒಟ್ಟು ರೂ.20,68,237/- ಡ್ರಾ ಮಾಡಿದೆ. ಆದರೆ, ಯಾವ ಯಾವ ಕಾಮಗಾರಿಗಳಿಗೆ ಹಣ ಖರ್ಚು ಮಾಡಿದೆ? ಯಾವ ಕೂಲಿಕಾರರಿಗೆ ಹಣ ಪಾವತಿಸಿದೆ? ಯಾವ ಕಾಮಗಾರಿಗಳನ್ನು ನಿರ್ವಹಣೆ ಮಾಡಿದೆ? ಒಂದು ವೇಳೆ ಕಾಮಗಾರಿ ನಿರ್ವಹಣೆ ಮಾಡಿದ ಕಾರ್ಮಿಕರು ಜಾಬ್ ಕಾರ್ಡ್ ಹೊಂದಿದ್ದಾರೆಯೇ ಅಥವಾ ಇಲ್ಲವೇ! ಹಾಗೂ ಸದರಿ ಕಾರ್ಮಿಕರಿಗೆ ಕೂಲಿ ಹಣವನ್ನು ಅವರ ಖಾತೆಗೆ ಜಮಾ ಮಾಡಲಾಗಿದೆಯೇ ಅಥವಾ ಇಲ್ಲವೇ! ಹಾಗೂ ಎಷ್ಟು ಹಣ ಜಮಾ ಮಾಡಿದೆ? ಎಂಬ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಅದೇ ರೀತಿ, ಜೆರಾಕ್ಸ್, ಡಿಟಿಪಿ ಮತ್ತು ಗಣಕಯಂತ್ರ ಆಪರೇಟರ್‌ಗಳ ವೇತನಕ್ಕಾಗಿ ಚೆಕ್ ನೀಡಲಾಗಿದೆಯೆಂದು ಹೇಳಿದ್ದಾರೆ. ಆದರೆ ಯಾವ ದಾಖಲೆಗಳನ್ನು ಜೆರಾಕ್ಸ್ ಮಾಡಿದೆ? ಎಂಬ ಬಗ್ಗೆ ಯಾವುದೇ ದಾಖಲೆಗಳಿಲ್ಲ ಮತ್ತು ಹಣ ನೀಡಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ. ಸದರಿ ಯೋಜನೆಗೆ ಉಳಿದ 14 ಚೆಕ್‌ಗಳನ್ನು ಖರ್ಚು ಮಾಡಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ ಹಾಗೂ ಅವುಗಳ ನಿರ್ವಹಣೆಗೆ ಸಂಬಂಧಪಟ್ಟಂತೆ ಯಾವುದೇ ದಾಖಲೆಗಳಿಲ್ಲ. ಆ ನಂತರ, ನೇಮಕಗೊಂಡ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಸದರಿ ಚೆಕ್‌ಗೆ ಸಂಬಂಧಪಟ್ಟಂತೆ 3ನೇ ಎದುರುದಾರರು ಪ್ರಭಾರ ನೀಡಿಲ್ಲವೆಂದು ಹೇಳಿದ್ದಾರೆ. ಆದರೆ, ಸದರಿ ಗ್ರಾಮ ಪಂಚಾಯತ್‌ನಲ್ಲಿ ಆ ಅವಧಿಯಲ್ಲಿ 3ನೇ ಎದುರುದಾರರು ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿದ್ದು, ಪ್ರತಿಯೊಂದು ಹಣಕಾಸಿಗೆ ಸಂಬಂಧಪಟ್ಟ ದಾಖಲೆಗಳ ನಿರ್ವಹಣೆ ಮಾಡುವುದು 3ನೇ ಎದುರುದಾರರ ಕರ್ತವ್ಯವಾಗಿದೆ. ಆದರೆ, 3ನೇ ಎದುರುದಾರರು ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದೇ ಎಂಜಿಎನ್‌ಆರ್‌ಇಜಿಎ ಯೋಜನೆಯ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ.

1 ನೇ ಎದುರುದಾರರು ಕಾರ್ಯನಿರ್ವಾಹಕ ಅಧಿಕಾರಿಯಾಗಿದ್ದು ಸದರಿಯವರು ದಿನಾಂಕ 31.05.2012 ರಂದು ನಿವೃತ್ತಿ ಹೊಂದಿ 4 ವರ್ಷಗಳಿಗೂ ಮೇಲ್ಪಟ್ಟಿದೆ. 2 ನೇ ಎದುರುದಾರರು ಸದರಿ ಗ್ರಾಮ ಪಂಚಾಯತಿಯ ಮಾಜಿ ಅಧ್ಯಕ್ಷರಾಗಿದ್ದು, ಸದರಿಯವರ ಅಧಿಕಾರಾವಧಿಯು ಸಹ ಮುಕ್ತಾಯಗೊಂಡಿದೆ. ಕಾರಣ 1 ಮತ್ತು 2 ನೇ ಎದುರುದಾರರ ವಿರುದ್ಧದ ನಡವಳಿಗಳನ್ನು ಕೈಬಿಡಲಾಗಿದೆ ಎಂದು ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿ ತಿಳಿಸಿರುತ್ತಾರೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ 3 ನೇ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, 3 ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, ಎದುರುದಾರರಾದ ಶ್ರೀ ಮಂಜುನಾಥ ಜೀವಾಜಿ ಬಾಗಲಕೋಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಳೂರು ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 846 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 08.12.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಂಜುನಾಥ ಜೀವಾಜಿ ಬಾಗಲಕೋಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಳೂರು ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ ರವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   (ಮೇಲೆ ಓದಲಾದ (1) ರಲ್ಲಿ ಸಲ್ಲಿಸಲಾದ ಪುಟ ಸಂಖ್ಯೆ 01 ರಿಂದ 170 ರವರೆಗೆ ಮೂಲ ದಾಖಲಾತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾವೇರಿ ಜಿಲ್ಲಾ ಪಂಚಾಯತಿ, ಹಾವೇರಿ.
5. ಕಾರ್ಯನಿರ್ವಾಹಕ ಅಧಿಕಾರಿ, ರಾಣಿಬೆನ್ನೂರು ತಾಲ್ಲೂಕು ಪಂಚಾಯತಿ, ರಾಣಿಬೆನ್ನೂರು, ಹಾವೇರಿ ಜಿಲ್ಲೆ.
   (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6. ಶ್ರೀ ಮಂಜುನಾಥ ಜೀವಾಜಿ ಬಾಗಲಕೋಟಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬೇಳೂರು ಗ್ರಾಮ ಪಂಚಾಯತಿ, ರಾಣಿಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.